# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ" ಯೋಜನೆಯ ಅನುಷ್ಠಾನಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾದ:** 1) ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 81 ಎಂಎಸ್‌ಟಿ2007. ದಿನಾಂಕ:02/05/2007.
2)ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 2 ಎಡಿಎಂ 2008. ದಿನಾಂಕ:26/05/2008.
3) ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 1 ಎಡಿಎಂ 2008. ದಿನಾಂಕ:23/04/2008.

**ಪ್ರಸ್ತಾವನೆ:**

ಕರ್ನಾಟಕ ಸರ್ಕಾರವು ರಾಜ್ಯದಲ್ಲಿ ಸರಳ ಸಾಮೂಹಿಕ ವಿವಾಹವನ್ನು ಜನಪ್ರಿಯಗೊಳಿಸಲು "ಆದರ್ಶ ವಿವಾಹ" ಯೋಜನೆಯನ್ನು ಮೇಲೆ (1)ರಲ್ಲಿ ಓದಲಾದ ಆದೇಶದನ್ವಯ ರಾಜ್ಯದಲ್ಲಿ ಜಾರಿಗೆ ತಂದಿದ್ದು, ಈ ಯೋಜನೆಯನ್ನು ಯಶಸ್ವಿಯಾಗಿ ಜಾರಿಗೊಳಿಸಲು 2008-09ನೇ ಸಾಲಿನಲ್ಲಿ ಆಯವ್ಯಯದ ಲೆಕ್ಕ ಶೀರ್ಷಿಕೆ 2250-00-800-2-17-059 (ಯೋಜನೆ) ರಲ್ಲಿ ರೂ.935.00 ಲಕ್ಷಗಳನ್ನು ಒದಗಿಸಲಾಗಿದೆ. ಈ ಪೈಕಿ ಮೊದಲನೇ ಹಂತವಾಗಿ ಮೇಲೆ (2)ರಲ್ಲಿ ಓದಲಾದ ಆದೇಶದನ್ವಯ ಎಲ್ಲಾ ಪ್ರಾದೇಶಿಕ ಆಯುಕ್ತರುಗಳಿಗೆ ತಲಾ ರೂ.50.00 ಲಕ್ಷಗಳಂತೆ ರೂ.200.00 ಲಕ್ಷಗಳನ್ನು ಬಿಡುಗಡೆ ಮಾಡಿ ಅವರ ವ್ಯಾಪ್ತಿಗೆ ಬರುವ ಜಿಲ್ಲಾಧಿಕಾರಿಗಳಿಗೆ ಅವಶ್ಯಕತೆಗೆ ಅನುಗುಣವಾಗಿ ಮರು ಹಂಚಿಕೆ ಮಾಡುವಂತೆ ತಿಳಿಸಲಾಗಿರುತ್ತದೆ. ಜಿಲ್ಲಾಧಿಕಾರಿಗಳು ಗದಗ ಜಿಲ್ಲೆ ಇವರು ಗದಗ ಜಿಲ್ಲೆಯಲ್ಲಿ ಸುಮಾರು 2000 ಬಡ ಕುಟುಂಬದ ವಧು ವರರಿಗೆ ಸಾಮೂಹಿಕ ವಿವಾಹ ಮಾಡುವ ಕಾರ್ಯ ಹಮ್ಮಿಕೊಂಡಿದ್ದು, ಆದರ್ಶ ವಿವಾಹ ಯೋಜನೆಯಡಿ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ನೀಡಲು ರೂ.200.00 ಲಕ್ಷಗಳ ಅನುದಾನ ಬಿಡುಗಡೆ ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಆದುದರಿಂದ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆರ್‌ಡಿ 2 ಎಡಿಎಂ 2008, ಬೆಂಗಳೂರು. ದಿನಾಂಕ:25/09/2008.**

ಆದರ್ಶ ವಿವಾಹ ಯೋಜನೆಯಡಿ ಫಲಾನುಭವಿಗಳಿಗೆ ಪ್ರೋತ್ಸಾಹ ಧನ ನೀಡಲು ಹೆಚ್ಚುವರಿ ಅನುದಾನವಾಗಿ ರೂ.200.00 ಲಕ್ಷ (ಇನ್ನೂರು ಲಕ್ಷಗಳು ಮಾತ್ರ) ಗಳನ್ನು ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ ಇವರಿಗೆ ಬಿಡುಗಡೆ ಮಾಡಲಾಗಿದೆ. ಅನುದಾನವನ್ನು ತಮ್ಮ ವ್ಯಾಪ್ತಿಗೆ ಬರುವ ಜಿಲ್ಲಾಧಿಕಾರಿಗಳಿಗೆ ಬೇಡಿಕೆ ಅನುಸಾರವಾಗಿ ಮರು ಹಂಚಿಕೆ ಮಾಡತಕ್ಕದ್ದು. ಈ ಯೋಜನೆಯ ಉಸ್ತುವಾರಿಯನ್ನು ಪ್ರಾದೇಶಿಕ ಆಯುಕ್ತರು, ಬೆಳಗಾವಿ ಮಾಡತಕ್ಕದ್ದು.

ಮೇಲ್ಕಂಡಂತೆ ಮಂಜೂರಾದ ಮೊತ್ತವು ಆದರ್ಶ ವಿವಾಹ ಯೋಜನೆಯ ಅನುಷ್ಠಾನಕ್ಕಾಗಿ ಮಾತ್ರ ಉಪಯೋಗಿಸತಕ್ಕದ್ದು, ಪ್ರಾದೇಶಿಕ ಆಯುಕ್ತರು ಬಿಡುಗಡೆಯಾದ ಅನುದಾನದ ಆರ್ಥಿಕ ಹಾಗೂ ಭೌತಿಕ ಪ್ರಗತಿ ವರದಿಯನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಂದ ಪಡೆದು ನಿರ್ದೇಶಕರು, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯ, ಬೆಂಗಳೂರು ಹಾಗೂ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ಆದೇಶವನ್ನು ಸರ್ಕಾರಿ ಆದೇಶ ಸಂಖ್ಯೆ. ಎಫ್‌ಡಿ 1 ಟಿಎಫ್‌ಡಿ 1996, ದಿನಾಂಕ:10/07/1996 ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಕಾತ್ಯಾಯಿನಿ ದೇವಿ)** 25/7/03
ಪೀಠಾಧಿಕಾರಿಗಳು,
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ
ನಿರ್ದೇಶನಾಲಯ, ಕಂದಾಯ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಇವರಿಗೆ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 100 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

**ಪ್ರತಿಯನ್ನು.**

1. ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ) (ಎ.ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ), ವಿಧಾನ ಸೌಧ.
5. ಪ್ರಾದೇಶಿಕ ಆಯುಕ್ತರು, ಬೆಳಗಾವಿ.
6. ಜಿಲ್ಲಾಧಿಕಾರಿಗಳು, ಗದಗ.
7. ನಿದೇಶಕರು.ಖಜಾನೆ ಇಲಾಖೆ.ಬೆಂಗಳೂರು.
8. ಗದಗ ಜಿಲ್ಲೆ ತಹಸೀಲ್ದಾರರುಗಳಿಗೆ.
9. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ.